**<u>ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ರವರ ನ್ಯಾಯಾಲಯ,</u>**

**<u>ತರೀಕೆರೆ</u>**

**<u>ಸಂಚಾರಿ ನ್ಯಾಯಾಲಯ, ಅಜ್ಜಂಪುರ</u>**

**<u>ಸಿ.ಸಿ.ನಂಃ 1863/2023</u>**

**<u>ಫಿರ್ಯಾದುದಾರರುಃ</u>** ಸರ್ಕಾರದ ಪರವಾಗಿ ಅಜ್ಜಂಪುರ ಪೊಲೀಸರು

**-: ವಿರುದ್ಧ :-**

**<u>ಆರೋಪಿತರುಃ</u>**

1. ಶ್ರೀ ರಘು.ಜಿ.ಟಿ,
ಬಿನ್ ಶ್ರೀ ತಿಮ್ಮಣ್ಣ
ಯಾನೆ ಹಟ್ಟಿ ತಿಮ್ಮಣ್ಣ,
30 ವರ್ಷಗಳು,

2. ಶ್ರೀಮತಿ ಇಂದ್ರಮ್ಮ,
ಕೋಂ ಶ್ರೀ ತಿಮ್ಮಣ್ಣ
ಹಟ್ಟಿ ತಿಮ್ಮಣ್ಣ,
60 ವರ್ಷ,

3. ಶ್ರೀಮತಿ ಕಾವ್ಯ,
ಕೋಂ ಶ್ರೀ ಪಾತಪ್ಪ,
29 ವರ್ಷ,

ಎಲ್ಲರ ವಾಸಃ ಕಾರೇಹಳ್ಳಿ ಗೊಲ್ಲರಹಟ್ಟಿ ಗ್ರಾಮ,
ಶಿವನಿ ಹೋಬಳಿ,
ಅಜ್ಜಂಪುರ ತಾಲ್ಲೂಕು.

**<u>ದೋಷಾರೋಪಣೆ</u>**

ಶ್ರೀ. ರಾಹುಲ್ ಶೆಟ್ಟಿಗಾರ್, ಬಿ.ಕಾಂ.(Hons.), ಎಲ್‌ಎಲ್.ಬಿ., ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕ 05.05.2023 ರಂದು ಬೆಳಿಗ್ಗೆ ಅಜ್ಜಂಪುರ ಪೋಲೀಸ್ ಠಾಣಾ ಸರಹದ್ದಿನ ಕಾರೇಹಳ್ಳಿ ಗೊಲ್ಲರಹಟ್ಟಿ ಗ್ರಾಮದ ವಾಸಿಯಾದ ಚಾಸಾ-1/ ಶ್ರೀಮತಿ ಓಂಕಾರಮ್ಮ ರವರು ನಿಮ್ಮಲ್ಲಿ 1 ನೇ ಆರೋಪಿ ರವರ ಕೂಲಿ ಕೆಲಸಕ್ಕೆ ಹೋಗಿದ್ದು ಚಾಸಾ-1 ರವರು ಕೂಲಿ ಹಣವನ್ನು ಪಡೆದುಕೊಂಡು ಬರುವಂತೆ ಚಾಸಾ-6/ ಶ್ರೀಮತಿ ಸವಿತಾ ರವರನ್ನು 1 ನೇ ಆರೋಪಿಯ ಮನೆಯ ಹತ್ತಿರ ಕಳುಹಿಸಿಕೊಟ್ಟಿದ್ದು ಆಗ ಚಾಸಾ-6 ರವರು 1 ನೇ ಆರೋಪಿಯ ಹತ್ತಿರ ಹಣವನ್ನು

ಕೇಳಿದಾಗ 1 ನೇ ಆರೋಪಿಯು ಮನೆಯ ಬಾಗಿಲಿಗೆ ಹಣ ಕೇಳಲು ಬಂದಿದ್ದೀಯಾ ಎಂದು ಗದರಿಸಿ ಕಳುಹಿಸಿದ್ದು, ಅದೇದಿನ ಸಂಜೆ 7.30 ಗಂಟೆಯಲ್ಲಿ ಚಾಸಾ-5/ ಶ್ರೀ ರಾಜಪ್ಪ ರವರು ಕುರಿರೊಪ್ಪದ ಹತ್ತಿರ ಇರುವಾಗ ಅಲ್ಲಿಗೆ ಬಂದ 1 ರಿಂದ 3 ನೇ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಚಾಸಾ-5 ರವರಿಗೆ ನಿಮ್ಮ ಮನೆಯವರು ನಮ್ಮ ಮೇಲೆ ಪೋಲೀಸ್ ಠಾಣೆಗೆ ದೂರು ನೀಡಿದ್ದಾರೆ ಎಂದು ಅವಾಚ್ಯವಾಗಿ ಬೈಯುತ್ತಿರುವಾಗ ಚಾಸಾ-1 ಮತ್ತು ಚಾಸಾ-4/ ಶ್ರೀ ಮಹಾಲಿಂಗಪ್ಪ ರವರು ಆರೋಪಿಗಳಾದ ನಿಮಗೆ ಇದರ ಬಗ್ಗೆ ಪೋಲೀಸ್ ಠಾಣೆಯಲ್ಲಿ ತೀರ್ಮಾನ ಮಾಡಿಕೊಂಡು ಬಂದಿದ್ದೇವೆ ಈಗ ಯಾಕೆ ಮಾತು ಎಂದು ಹೇಳಿದ್ದಕ್ಕೆ ನಿಮ್ಮಲ್ಲಿ 1 ನೇ ಆರೋಪಿಯು ಏ ಬೇವರ್ಸಿಮುಂಡೆ, ಸೂಳೆಮುಂಡೆ ನಿನ್ನಿಂದಲೇ ಇದೆಲ್ಲಾ ಆಗಲು ಕಾರಣ ಎಂದು ಅವರ ಶಾಂತಿಭಂಗ ಮಾಡುವ ಉದ್ದೇಶದಿಂದ ಅವಾಚ್ಯ ಶಬ್ದಗಳಿಂದ ಬೈದು ಅವಮಾನಿಸಿರುತ್ತೀರಿ. ಈ ರೀತ್ಯ 1 ರಿಂದ 3 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 3 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ನಿಮ್ಮಲ್ಲಿ 1 ನೇ ಆರೋಪಿ ಚಾಸಾ-1 ರವರನ್ನು ಹಿಡಿದುಕೊಂಡು ಕೆಳಗೆ ತಳ್ಳಿ ತಲೆ ಕೂದಲು ಹಿಡಿದು ಎಳೆದಾಡಿ ಜಾಕೀಟ್ ಎಳೆದು ಅಪರಾಧಿಕ ಬಲಪ್ರಯೋಗವನ್ನು ಮಾಡಿರುತ್ತೀರಿ. ಈ ರೀತ್ಯ 1 ರಿಂದ 3 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 354(ಬಿ) ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 3 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ನಿಮ್ಮಲ್ಲಿ 1 ನೇ ಆರೋಪಿ ಗಲಾಟೆ ಬಿಡಿಸಲು ಬಂದ ಚಾಸಾ-5 ರವರಿಗೆ ದೊಣ್ಣೆಯಿಂದ ಮೈಕೈಗೆ ಹೊಡೆದಿರುತ್ತೀರಿ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ. ಈ ರೀತ್ಯ 1 ರಿಂದ 3 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ನಾಲ್ಕನೇಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 3 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ನಿಮ್ಮಲ್ಲಿ 2 ಮತ್ತು 3 ನೇ ಆರೋಪಿ ಚಾಸಾ–1 ಮತ್ತು 4 ರವರನ್ನು ತಳ್ಳಿ ಕೈಯಿಂದ ಹೊಡೆದಿರುತ್ತೀರಿ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ. ಈ ರೀತ್ಯ 1 ರಿಂದ 3 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 3 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, 1 ರಿಂದ 3 ನೇ ಆರೋಪಿಗಳಾದ ನೀವು ನಮ್ಮ ಮೇಲೆ ಪೋಲೀಸ್ ಠಾಣೆಗೆ ದೂರು ನೀಡಿದರೆ ನಿಮ್ಮನ್ನು ಕೊಲೆ ಮಾಡದೆ ಬಿಡುವುದಿಲ್ಲವೆಂದು ಕೊಲೆ ಬೆದರಿಕೆ ಹಾಕಿರುತ್ತೀರಿ. ಈ ರೀತ್ಯ 1 ರಿಂದ 3 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಸದರಿ ಮೇಲ್ಕಂಡ 1 ರಿಂದ 3 ನೇ ಆರೋಪಿಗಳಾದ ನೀವು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮೇಲೆ ಹೇಳಿದ ಅಪರಾದಗಳನ್ನು ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗತಕ್ಕದ್ದೆಂದು ಆದೇಶಿಸಲಾಗಿದೆ.

ಪ್ರಃ1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದಿರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಗಳ ಉತ್ತರಃ

ಆರೋಪಿ 1: Yes

ಆರೋಪಿ 2: Yes

ಆರೋಪಿ 3: Yes

ಪ್ರಃ2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಗಳ ಉತ್ತರಃ

ಆರೋಪಿ 1:Pleaded not guilty and claimed to be tried

ಆರೋಪಿ 2: Pleaded not guilty and claimed to be tried

ಆರೋಪಿ 3: Pleaded not guilty and claimed to be tried

(ಆರೋಪಿತರಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ತಿಳಿಸಿ ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣಿಕರಿಸುತ್ತೇನೆ)

ದಿನಾಂಕ : 10.07.2025

ಸಹಿ/-
(ರಾಹುಲ್ ಶೆಟ್ಟಿಗಾರ್)
ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ
ಪ್ರ.ದ.ನ್ಯಾದಂ., ತರೀಕೆರೆ.
(ಸಂಚಾರಿ ನ್ಯಾಯಾಲಯ, ಅಜ್ಜಂಪುರ)

ಆರೋಪಿತರ ಸಹಿಃ